# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 704

**ಸದಸ್ಯರ ಹೆಸರು** : ಶ್ರೀಮತಿ ಬಲ್ಕೀಸ್ ಬಾನು (ವಿಧಾನ ಸಭೆಯಿಂದ ಚುನಾಯಿತರಾದವರು)

**ಉತ್ತರಿಸುವ ದಿನಾಂಕ** : 22.07.2024

**ಉತ್ತರಿಸುವ ಸಚಿವರು** : ಮಾನ್ಯ ಅರಣ್ಯ, ಜೀವಿಶಾಸ್ತ್ರ, ಮತ್ತು ಪರಿಸರ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಇತ್ತೀಚಿನ ದಿನಗಳಲ್ಲಿ ರೈತರು ಮತ್ತು ಅರಣ್ಯ ಇಲಾಖೆಯ ನಡುವೆ ಸಂಘರ್ಷ ಹೆಚ್ಚಾಗಿದ್ದು, ರೈತರ ಜಮೀನಿನ ಮತ್ತು ಅರಣ್ಯ ಇಲಾಖೆಯ ಗಡಿ ಗುರುತಿಸಿರುವ ವಿವಾದಗಳನ್ನು ಪರಿಹರಿಸಲು ವಿಳಂಬ ನೀತಿ ಅನುಸರಿಸಲು ಕಾರಣಗಳೇನು; | ಇತ್ತೀಚಿನ ದಿನಗಳಲ್ಲಿ ರೈತರು ಮತ್ತು ಅರಣ್ಯ ಇಲಾಖೆಯ ನಡುವ ಸಂಘರ್ಷ ಹೆಚ್ಚಾಗಿದ್ದು, ರೈತರ ಜಮೀನಿನ ಮತ್ತು ಅರಣ್ಯ ಇಲಾಖೆಯ ಗಡಿ ಗುರುತಿಸುವ ವಿವಾದಗಳನ್ನು ಪರಿಹರಿಸಲು ಅರಣ್ಯ ಇಲಾಖೆಯಿಂದ ಯಾವುದೇ ವಿಳಂಬ ನೀತಿ ಅನುಸರಿಸುತ್ತಿರುವುದಿಲ್ಲ. ರಾಜ್ಯದಲ್ಲಿರುವ ವಿವಿಧ ಅರಣ್ಯ ಪ್ರದೇಶಗಳ ಗಡಿ ಹದ್ದು ಬಸ್ತು ಕಾರ್ಯ ಕೈಗೊಂಡು ಆರ್.ಸಿ.ಸಿ ಪಿಲ್ಲರ್, ಗಡಿ ಕಲ್ಲು ಹಾಗೂ ಕೈರನ್‌ಗಳನ್ನು ಕ್ಷೇತ್ರದಲ್ಲಿ ಗಡಿ ಗುರುತಿಸುವ ಕಾರ್ಯ ಕೈಗೊಳ್ಳಲಾಗುತ್ತದೆ. ಒಂದು ವೇಳೆ ಅರಣ್ಯ ಒತ್ತುವರಿದಾರರು ಒತ್ತುವರಿ ಪ್ರದೇಶಕ್ಕೆ ಸಂಬಂಧಿಸಿದಂತೆ ಮತ್ತು ಸದರಿ ಪ್ರದೇಶದ ಮೇಲೆ ತಮ್ಮ ಹಕ್ಕು/ಮಾಲಿಕತ್ವವನ್ನು ಸಾದರ ಪಡಿಸುವ ಕಂದಾಯ ದಾಖಲೆಗಳನ್ನು ಒದಗಿಸಿದ್ದಲ್ಲಿ/ಹಾಜರುಪಡಿಸಿದ್ದಲ್ಲಿ ಅಂತಹ ಪ್ರಕರಣಗಳನ್ನು ಪರಿಶೀಲಿಸಿ, ಅಗತ್ಯವಿದ್ದರೆ ಕಂದಾಯ ಇಲಾಖೆಯೊಂದಿಗೆ ಜಂಟಿ ಮೋಜಣಿ ಕಾರ್ಯವನ್ನು ಕೈಗೊಳ್ಳಲಾಗುತ್ತದೆ. ಇಂತಹ ಜಂಟಿ ಮೋಜಣಿ ಕಾರ್ಯಗಳನ್ನು ಕಂದಾಯ ಇಲಾಖೆಯು ಕೈಗೊಳ್ಳಬೇಕಾಗಿದ್ದು, ಅರಣ್ಯ ಇಲಾಖೆಯು ಜಂಟಿ ಮೋಜಣಿ ಕಾರ್ಯದ ಭಾಗವಾಗಿರುತ್ತದೆ. |
| ಆ) | ಅರಣ್ಯ ಇಲಾಖೆಯ ಜಂಟಿ ಸರ್ವೆಗೆ ಸಿಬ್ಬಂದಿ ಕೊರತೆ ಇದೆಯೇ; (ವಿವರ ನೀಡುವುದು) | ಅರಣ್ಯ ಇಲಾಖೆಯಲ್ಲಿ ಸರ್ವೆ ಕಾರ್ಯವು ಮುಖ್ಯವಾಗಿ ಉಪ ವಲಯ ಅರಣ್ಯಾಧಿಕಾರಿ-ಕಂ-ಮೋಜಣಿದಾರರು ವೃಂದದ ಸಿಬ್ಬಂದಿಗಳು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td></td><td></td><td>ನಿರ್ವಹಿಸುತ್ತಿದ್ದು, ಸದರಿ ವೃಂದದಲ್ಲಿನ ಮಂಜೂರಾದ, ಭರ್ತಿಯಾದ ಹಾಗೂ ಖಾಲಿ ಇರುವ ಹುದ್ದೆಗಳ ವಿವರ ಈ ಕೆಳಗಿನಂತಿದೆ:-
<table>
<tr><th>ಮಂಜೂರಾದ ಹುದ್ದೆಗಳು</th><th>ಭರ್ತಿಯಾದ ಹುದ್ದೆಗಳು</th><th>ಖಾಲಿ ಹುದ್ದೆಗಳು</th></tr>
<tr><td>3008</td><td>2417</td><td>591</td></tr>
</table>
ಸದರಿ ಖಾಲಿ ಹುದ್ದೆಗಳನ್ನು ಭರ್ತಿಮಾಡಲು ಕ್ರಮವಹಿಸಲಾಗುತ್ತಿದೆ.</td></tr>
<tr><td>ಇ)</td><td>ಜಂಟಿ ಸರ್ವೆ ಪ್ರಕರಣಗಳನ್ನು ಶೀಘ್ರವಾಗಿ ವಿಲೇವಾರಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?</td><td>ಒತ್ತುವರಿ ಪ್ರದೇಶಕ್ಕೆ ಸಂಬಂಧಿಸಿದಂತೆ ಮತ್ತು ಸದರಿ ಪ್ರದೇಶದ ಮೇಲೆ ತಮ್ಮ ಹಕ್ಕು/ಮಾಲಿಕತ್ವವನ್ನು ಸಾದರ ಪಡಿಸುವ ಕಂದಾಯ ದಾಖಲೆಗಳನ್ನು ಒದಗಿಸಿದ್ದಲ್ಲಿ/ಹಾಜರುಪಡಿಸಿದ್ದಲ್ಲಿ ಅಂತಹ ಪ್ರಕರಣಗಳನ್ನು ಪರಿಶೀಲಿಸಿ, ಅಗತ್ಯವಿದ್ದರೆ ಕಂದಾಯ ಇಲಾಖೆಯೊಂದಿಗೆ ಜಂಟಿ ಮೋಜಣಿ ಕಾರ್ಯವನ್ನು ಕೈಗೊಳ್ಳಲಾಗುತ್ತದೆ. ಜಂಟಿ ಸರ್ವೆ ಪ್ರಕರಣಗಳಲ್ಲಿ ಅರಣ್ಯ ಇಲಾಖೆಯ ಸಿಬ್ಬಂದಿಯು ಕಂದಾಯ ಇಲಾಖೆಯ ಸಿಬ್ಬಂದಿಯೊಂದಿಗೆ ಸಮನ್ವಯ ಸಾಧಿಸಿ ನಿಗಧಿತ ಸಮಯದಲ್ಲಿ ಜಂಟಿ ಮೋಜಣಿ ಕಾರ್ಯವನ್ನು ಕೈಗೊಂಡು, ಪ್ರಕರಣಗಳನ್ನು ಶ್ರೀಘ್ರವಾಗಿ ವಿಲೇವಾರಿ ಮಾಡಲು ಸರ್ಕಾರದಿಂದ ಎಲ್ಲಾ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿರುತ್ತದೆ.</td></tr>
</table>

**ಸಂಖ್ಯೆ: FEE/84/FGL/2024**

(Signature)

**(ಈಶ್ವರ ಬಿ. ಖಂಡ್ರೆ)**

ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು